# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 702 (824)
2. ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ., (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.
4. ಉತ್ತರಿಸಬೇಕಾದ ದಿನಾಂಕ : 10.03.2026.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ತೋಟಗಳಿಗೆ ಎಲೆ ಚುಕ್ಕಿ ರೋಗ ದೊಡ್ಡ ಪ್ರಮಾಣದಲ್ಲಿ ಹರಡಿರುವ ಕಾರಣದಿಂದ ಸಾಕಷ್ಟು ಅಡಿಕೆ ಮರಗಳು ನಾಶವಾಗಿದ್ದು, ಅಡಿಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲಿಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಕಳೆದ 2 ವರ್ಷಗಳಲ್ಲಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಡಿಕೆ ಮರಗಳು ಹಾನಿಗೊಳಗಾಗಿವೆ ಅಥವಾ ಸಂಪೂರ್ಣವಾಗಿ ನಾಶವಾಗಿವೆ: (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು). | ಕಳೆದ 2 ವರ್ಷಗಳಲ್ಲಿ ಎಂದರೆ 2024-25 ಹಾಗೂ 2025-26 ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದಾಗಿ ಎಲೆಚುಕ್ಕೆ ರೋಗ ಹರಡಿ ಅನುಕ್ರಮವಾಗಿ 33746 ಹಾಗೂ 42020 ಅಡಿಕೆ ಮರಗಳು ಹಾನಿಗೊಳಗಾಗಿರುವುದಾಗಿ ಅಂದಾಜಿಸಲಾಗಿದೆ. ತಾಲ್ಲೂಕುವಾರು ವಿವರ ಈ ಕೆಳಕಾಣಿಸಿದಂತಿದೆ. |

| ಕ್ರ. ಸಂ. | ತಾಲ್ಲೂಕು | ಹಾನಿಗೊಳಗಾಗಿರುವ ಅಡಿಕೆ ಮರಗಳು (ಸಂಖ್ಯೆಗಳಲ್ಲಿ) | |
|---|---|---|---|
| | | 2024-25 | 2025-26 |
| 1. | ಮಂಗಳೂರು | 4895 | 1869 |
| 2. | ಬಂಟ್ವಾಳ | 9913 | 15648 |
| 3. | ಬೆಳ್ತಂಗಡಿ | 1585 | 0 |
| 4. | ಪುತ್ತೂರು | 4950 | 5795 |
| 5. | ಸುಳ್ಯ | 811 | 306 |
| 6. | ಕಡಬ | 2770 | 11462 |
| 7. | ಮೂಡಬಿದ್ರೆ | 2105 | 988 |
| 8. | ಮುಲ್ಕಿ | 0 | 0 |
| 9. | ಉಳ್ಳಾಲ | 6717 | 5952 |
| **ಒಟ್ಟು** | | **33746** | **42020** |

| | | |
|---|---|---|
| | | ಎಲೆಚುಕ್ಕೆ ರೋಗದಿಂದ ಅಡಿಕೆ ಮರಗಳ ಇಳುವರಿ ಕುಂಠಿತವಾಗಿರುತ್ತದೆ ಆದರೆ ಸಂಪೂರ್ಣವಾಗಿ ನಾಶವಾಗುವ ಸಂಭವವಿರುವುದಿಲ್ಲ. |
| ಇ) | ಅಡಿಕೆ ಮರ ಹಾನಿಗೊಳಗಾಗಿರುವ ಅಥವಾ ನಾಶವಾಗಿರುವ ರೈತರಿಗೆ ಮರು ನಾಟಿ ಮಾಡಲು ಕೇರಳ ಮಾದರಿಯಲ್ಲಿ ಸಹಾಯಧನ ನೀಡಬೇಕೆ ಎಂಬ ಬೇಡಿಕೆ ತೀವ್ರವಾಗಿದ್ದು, ಸರ್ಕಾರ ಕೇರಳ ಮಾದರಿಯಲ್ಲಿ ಈಗಾಗಲೇ ಸಹಾಯ ಧನ ನೀಡಿದೆಯೇ: ರೈತರಿಗೆ ಮರು ನಾಟಿ ಮಾಡಲು ಇದುವರೆಗೆ ನೀಡಿರುವ ಸಹಾಯಧನದ ವಿವರಗಳೇನು? ತಾಲ್ಲೂಕುವಾರು ವಿವರ ನೀಡುವುದು): | ಕೇರಳ ಮಾದರಿಯಂತೆ 2022-23 ನೇ ಸಾಲಿನಲ್ಲಿ ಕಾಸರಗೋಡು ಜಿಲ್ಲೆಯಲ್ಲಿ ಮಾತ್ರ ನಾಶವಾಗಿರುವ ಅಡಿಕೆ ಮರವನ್ನು ತೆಗೆಯಲು ಪ್ರತಿ ಮರಕ್ಕೆ ರೂ. 200 ರಂತೆ ಹಾಗೂ ಹೊಸದಾಗಿ ಮರು ನಾಟಿ ಮಾಡಲು ಗಿಡಕ್ಕೆ ರೂ. 20 ರಂತೆ ಸಹಾಯಧನವನ್ನು ನೀಡಲಾಗಿರುತ್ತದೆ. ಪ್ರಸ್ತುತ ಈ ಕಾರ್ಯಕ್ರಮವು ಜಾರಿಯಲ್ಲಿರುವುದಿಲ್ಲ. ಕರ್ನಾಟಕ ರಾಜ್ಯದಲ್ಲಿ ಕೇರಳ ಮಾದರಿಯಂತೆ ಸಹಾಯಧನ ನೀಡುವ ಪ್ರಸ್ತಾವನೆ ಇರುವುದಿಲ್ಲ. |
| ಈ) | ಬಹುವಾರ್ಷಿಕವಾಗಿ ಫಸಲು ನೀಡುವ ಅಡಿಕೆ ಮರಗಳು ನಾಶವಾಗಿರುವ ಕಾರಣದಿಂದ ಬೆಳೆಗಾರರು ಆರ್ಥಿಕವಾಗಿ ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿದ್ದು ಹಾಳಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: ಒದಗಿಸಿರುವ ನೆರವುಗಳೇನು: (ವಿವರ ನೀಡುವುದು). | ಅಡಿಕೆ ಎಲೆಚುಕ್ಕೆ ರೋಗ ಬಾಧಿತ ಪ್ರದೇಶದಲ್ಲಿ ತೋಟಗಾರಿಕೆ ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:<br>1. 2025-26 ನೇ ಸಾಲಿನಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ "Special Interventions" - ಅಡಿಕೆ ಬೆಳೆಯಲ್ಲಿ ಎಲೆಚುಕ್ಕೆ ರೋಗದ ನಿಯಂತ್ರಣ ಕಾರ್ಯಕ್ರಮದಡಿ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಪ್ರತಿ ಹೆಕ್ಟೇರಿಗೆ ತಗಲುವ ರೂ.5000/- ಗಳಲ್ಲಿ ಶೇ.30 ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ದರದಲ್ಲಿ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ. ಈ ಬಾಬ್ತು ರೂ.860.65 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ಈವರೆಗೂ 16866 ರೈತರಿಗೆ 33450 ಹೆಕ್ಟೇರ್ ಪ್ರದೇಶಕ್ಕೆ ರೂ.553.05 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ. ಕಾರ್ಯಕ್ರಮ ಪ್ರಗತಿಯಲ್ಲಿರುತ್ತದೆ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗೆ ಒಟ್ಟು ರೂ.60.59 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಈವರೆಗೆ 1640 ರೈತರಿಗೆ ರೂ.24.73 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ.<br>2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ |

ವಿಮಾ ಪರಿಹಾರವನ್ನು ಒದಗಿಸಲಾಗುತ್ತಿದೆ.

| ಕ್ರ. ಸಂ. | 2024-2025 ನೇ ಸಾಲಿನ ಬೆಳೆ ವಿಮೆ ವಿವರ | ಅಡಿಕೆ ಬೆಳೆಯುವ ಜಿಲ್ಲೆಗಳಿಗೆ |
|---|---|---|
| 1. | ಅರ್ಜಿಗಳ ಸ್ವೀಕೃತ (ಸಂಖ್ಯೆ) | 5,28,705 |
| 2. | ವಿಸ್ತೀರ್ಣ (Covered) ಹೆಕ್ಟೇರ್ ಗಳಲ್ಲಿ | 1,73,060.42 |
| 3. | ವಿಮಾ ಮೊತ್ತ (Sum insured) (Amount in Lakhs) | 2,21,517.33 |
| 4. | ಪಾವತಿಸಲಾದ ವಿಮಾ ಮೊತ್ತ (Claim amount in Lakhs) | 53,139.26 |
| 5. | ಫಲಾನುಭವಿಗಳ ಸಂಖ್ಯೆ | 4,01,697 |
| 6. | 2025-2026 ನೇ ಸಾಲಿನ ಬೆಳೆ ವಿಮೆ ಅರ್ಜಿಗಳ ಸ್ವೀಕೃತ (ಸಂಖ್ಯೆ) | 6,52,440 |

3. ಅಡಿಕೆ ಬೆಳೆಯ ಎಲೆಚುಕ್ಕೆ ರೋಗ ನಿಯಂತ್ರಣೆಯ ಬಗ್ಗೆ ಸಂಶೋಧನೆಗಾಗಿ 2023-24ನೇ ಸಾಲಿನಲ್ಲಿ ರೂ.43.61/- ಲಕ್ಷಗಳನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ರವರಿಗೆ ಒದಗಿಸಲಾಗಿದೆ. ಸಂಶೋಧನೆಗಾಗಿ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ ರೈತರ ತಾಕುಗಳಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿ 8 ಪ್ರಾತ್ಯಕ್ಷತೆಗಳನ್ನು ಕೈಗೊಳ್ಳಲಾಗಿರುತ್ತದೆ. ಈ ಅಧ್ಯಯನದಿಂದ ಸಮಗ್ರ ರೋಗ ನಿರ್ವಹಣೆಗಾಗಿ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಸಮುದಾಯ ಮಟ್ಟದಲ್ಲಿ ಶಿಲೀಂಧ್ರ ನಾಶಕಗಳ ಸಕಾಲಿಕ ಸಿಂಪರಣೆ ಮಾಡುವುದರಿಂದ, ಶಿಲೀಂಧ್ರದ ಸೋಂಕು, ರೋಗದ ಉಲ್ಬಣ ಮತ್ತು ಹರಡುವಿಕೆಯನ್ನು ಕಡಿಮೆ ಮಾಡಲು ಸಹಾಯಕವಾಗುತ್ತದೆಂದು ವರದಿ ಮಾಡಲಾಗಿರುತ್ತದೆ. ಈ ಕುರಿತು ರೈತರಿಗೆ ಅರಿವು ಮೂಡಿಸಲಾಗುತ್ತಿದೆ.
4. ಪ್ರಸಕ್ತ ಸಾಲಿನಲ್ಲಿ ಅಡಿಕೆ ಬೆಳೆಗೆ ಬಾಧಿಸುವ ಎಲೆಚುಕ್ಕೆ ರೋಗ, ಹಳದಿ ಎಲೆ ರೋಗ ಹಾಗೂ ಕೊಳೆ ರೋಗಗಳ ನಿರ್ವಹಣೆಗಾಗಿ CPCRI (Central Plantation Crops Research Institute), ಕಾಸರಗೋಡು ಸಂಸ್ಥೆಯ ಪ್ಯಾಕೇಜ್ ಶಿಫಾರಸ್ಸು

| | | |
|---|---|---|
| | | ಮಾಡಿದ್ದು, ಈ ಅನ್ವಯ ಫೈಟೋಸಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಸಸ್ಯ ಸಂರಕ್ಷಣಾ ಕ್ರಮಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಒಟ್ಟಾರೆ ರೂ.57776.33 ಲಕ್ಷಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಲಾಗಿದೆ. ಇದರಲ್ಲಿ NHM-MIDH ಮಾರ್ಗಸೂಚಿಯನ್ವಯ ಶೇ.30 ರಷ್ಟು ಸಹಾಯಧನದಂತೆ ಒಟ್ಟು ರೂ.17332.90 ಲಕ್ಷಗಳನ್ನು ಒದಗಿಸಬೇಕಾಗಿದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು ರೂ.10399.74 ಲಕ್ಷಗಳು ಹಾಗೂ ರಾಜ್ಯ ಸರ್ಕಾರದ ಪಾಲು ರೂ.6933.14 ಲಕ್ಷಗಳಿದ್ದು, ಕೇಂದ್ರ ಪಾಲಿನ ಅನುದಾನ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br>5. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರ ತಜ್ಞರ ಸಹಯೋಗದೊಂದಿಗೆ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳು ಹಾಗೂ ತರಬೇತಿ ಮತ್ತು ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. |

ಸಂಖ್ಯೆ: HORTI 99 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)

ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು